**<u>2ನೇ ಹೆಚ್ಚುವರಿ ದಿವಾಣಿ ನ್ಯಾಯಾಲಯ ಹಾಗೂ ಪ್ರ.ದ.ನ್ಯಾ.ದಂಡಾಧಿಕಾರಿಗಳು, ಅಥಣಿ</u>**

ಸಿ.ಸಿ.ನಂ.91/16
ಸಿಡಬ್ಲೂಃ 03 ಪಿಡಬ್ಲೂಃ02

ಸಾಕ್ಷಿದಾರರ ಹೆಸರುಃ ಸಿದ್ದಪ್ಪ ರಾವಸಾಬ ಮಾದಪ್ಪಗೋಳ

ವಯಸ್ಸು: 39 ವರ್ಷ

ಉದ್ಯೋಗ : ಶೇತ್ಕಿ

ವಾಸಸ್ಥಳ : ಬೇಡರಹಟ್ಟಿ

ದಿನಾಂಕ: 17/11/2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚಣ ಬೋದಿಸಲಾಯಿತು.

**<u>ಮುಖ್ಯ ವಿಚಾರಣೆ ಸಸಅ ರವರಿಂದಃ</u>**

ಸದರಿ ಪ್ರಕರಣದ ಬಗ್ಗೆ ನನಗೆ ಗೊತ್ತಿಲ್ಲ. ಚಾಸಾ 1 ಮತ್ತು 2 ಮತ್ತು ಆರೋಪಿತರ ಪರಿಚಯ ಇಲ್ಲ. ನನ್ನ ಸಮಕ್ಷಮ ಯಾವುದೇ ಜಾಗೆಯ ಪಂಚನಾಮೆ ಮಾಡಿಲ್ಲ. ಯಾವದೇ ವಸ್ತುಗಳನ್ನು ಜಪ್ತು ಪಡಿಸಿಕೊಂಡಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ ಕೆಲವು ದಾಖಲೆಗಳಿಗೆ ಸಹಿ ಮಾಡಿದ್ದು ಅದರಲ್ಲಿ ಬರೆದ ವಿಷಯ ನನಗೆ ಗೊತ್ತಿಲ್ಲ. ಆ ದಾಖಲೆಯು ಅಪರಾಧ ಸ್ಥಳದ ಪಂಚನಾಮೆಯಾಗಿದ್ದು , ಅದರಲ್ಲಿರುವ ಸಾಕ್ಷಿಯ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು , ಅಪರಾಧ ಸ್ಥಳದ ಪಂಚನಾಮೆಯನ್ನು ಈಗಾಗಲೇ ನಿಪಿ 1 ಎಂದು ಗುರುತಿಸಲಾಗಿದ್ದು , ಸಾಕ್ಷಿಯ ಸಹಿಯನ್ನು ನಿಪಿ 1 ಬಿ ಅಂತಾ ಗುರುತಿಸಲಾಯಿತು. ನಿಪಿ 1 ರಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಎಪಿಪಿ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟಿ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಅನುಮತಿ ನೀಡಲಾಯಿತು.)**

**<u>ವಾಟೀ ಸವಾಲು ಎಪಿಪಿ ಯವರಿಂದಃ</u>**

ದಿಃ 09-05-2014 ರಂದು ಚಾಸಾ-2 ರವರ ಜೊತೆ ಚಾಸಾ-1 ರವರು ತೋರಿಸಿದ ಅಪಘಾತ ಸ್ಥಳದಲ್ಲಿ ನಾನು ಹಾಜರಿದ್ದೆ ಹಾಗೂ ನನ್ನ ಹಾಗೂ ಚಾಸಾ-2 ರವರ ಸಮಕ್ಷಮ ನಿಪಿ-1 ರ ಪ್ರಕಾರ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಕಾಡು ಕಟ್ಟಿಗೆಯ ಬಡಿಗೆಯನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-1 ರ ಬಗ್ಗೆ ನನಗೆ ಮಾಹಿತಿ ಇದ್ದರು ಸಹ ಆರೋಪಿತರಿಗೆ ಸಹಾಯವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ವಾಟಿ ಸವಾಲುಃ ಆರೋಪಿತರ ಪರವಾಗಿ ವಕೀಲರಿಂದಃ</u>**

-ಏನೂ ಇಲ್ಲ -

ಮರು ವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ

2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ.ನ್ಯಾಯಾಲಯ, ಅಥಣಿ